# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ 2013-14ನೇ ಸಾಲಿನ ಆಯವ್ಯಯದನ್ವಯ ಮೂರನೇ ತ್ರೈಮಾಸಿಕ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 06 ಎಂಎಂಎಸ್ 2013, ಬೆಂಗಳೂರು, ದಿನಾಂಕ: 9.05.2013.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 06 ಎಂಎಂಎಸ್ 2013, ಬೆಂಗಳೂರು, ದಿನಾಂಕ: 13.08.2013.
3. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಂ.6/ಅ.ದಾ/ಅ.ಬಿ/01/13-14, ದಿನಾಂಕ: 07-10-2013

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ 2013-14ನೇ ಸಾಲಿಗೆ ಲಿಂಕ್ ಡಾಕ್ಯುಮೆಂಟ್‌ನಲ್ಲಿ ನಿಗಧಿಪಡಿಸಿರುವ ರೂ.81342.28 ಲಕ್ಷಗಳಲ್ಲಿ ಶೇ.25% ರಂತೆ ಮೊದಲನೇ ತ್ರೈಮಾಸಿಕವಾಗಿ ರೂ.20335.57 ಲಕ್ಷಗಳನ್ನು ಜಿಲ್ಲಾವಾರು ಹಂಚಿಕೆಮಾಡಿ ಬಿಡುಗಡೆಗೊಳಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ಇವರು ಅಕ್ಷರದಾಸೋಹ ಕಾರ್ಯಕ್ರಮಕ್ಕೆ ಲಿಂಕ್ ಡಾಕ್ಯುಮೆಂಟ್ ಜಿಲ್ಲಾ ಲಿಂಕ್‌ಕೋಡ್ ನಡಿ 2013-14ನೇ ಸಾಲಿಗೆ ನಿಗಧಿಪಡಿಸಲಾದ ರೂ.81342.28 ಲಕ್ಷಗಳಲ್ಲಿ ಶೇ.25% ರಂತೆ ಮೂರನೇ ತ್ರೈಮಾಸಿಕವಾಗಿ ರೂ.20335.57 ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 06 ಎಂಎಂಎಸ್ 2013, ಬೆಂಗಳೂರು ದಿನಾಂಕ: 07-11-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಲಿಂಕ್ ಡಾಕ್ಯೂಮೆಂಟ್ ಲೆಕ್ಕ ಶೀರ್ಷಿಕೆ 2202-00-101-0-18(ಯೋಜನೆ) ಲಿಂಕ್‌ಕೋಡ್ 2202-01-196-6-01 ರಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮದಡಿ ಮಧ್ಯಾಹ್ನ ಉಪಹಾರ ಯೋಜನೆಯ ಅನುಷ್ಠಾನಕ್ಕಾಗಿ 2013-14 ನೇ ಸಾಲಿನ ಮೂರನೇ ತ್ರೈಮಾಸಿಕವಾಗಿ ರೂ.**20335.57 ಲಕ್ಷ (ಇಪ್ಪತ್ತು ಸಾವಿರದ ಮುನ್ನೂರ ಮುವತ್ತೈದು ಲಕ್ಷ ಮತ್ತು ಐವತ್ತೇಳು ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ಈ ಆದೇಶದೊಂದಿಗೆ ಅನುಬಂಧಿಸಿದಂತೆ ಜಿಲ್ಲಾವಾರು ಹಂಚಿಕೆ ಮಾಡಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲು ಆದೇಶಿಸಿದೆ.

ಬಿಡುಗಡೆಗೊಳಿಸಲಾದ ಈ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳಿಗೆ ಮರು ಬಿಡುಗಡೆ ಮಾಡಲು ಸೂಚಿಸಿದೆ. ಮುಖ್ಯ ಲೆಕ್ಕಾಧಿಕಾರಿಗಳಿಗೆ ರಾಜ್ಯ ವಲಯದಿಂದ ಡ್ರಾ ಮಾಡಿ ಜಿಲ್ಲಾ ಪಂಚಾಯತ್ ನಿಧಿ-1ಕ್ಕೆ ಜಮೆ ಮಾಡಿ ಅಕ್ಷರ ದಾಸೋಹ ಕಾರ್ಯಕ್ರಮ ಅನುಷ್ಠಾನಗೊಳಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿಗಳಿಗೆ ಆರ್ಥಿಕ ಇಲಾಖೆಯು ಅಧಿಕಾರ ಪ್ರತ್ಯಾಯೋಜನೆ ನೀಡಿ ಹೊರಡಿಸಿರುವ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2013, ದಿನಾಂಕ:10/05/2013 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಐ.ಎಫ್.ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ)

ಇವರಿಗೆ:

1. ಮಹಾಲೇಖಪಾಲರು, (ಎ & ಇ) ಕರ್ನಾಟಕ, ಬೆಂಗಳೂರು.
2. ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಸಹ ನಿರ್ದೇಶಕರು (ಮಧ್ಯಾಹ್ನ ಉಪಹಾರ ಯೋಜನೆ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಮುಖ್ಯ ಲೆಕ್ಕಾಧಿಕಾರಿ, ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು (ಆಯುಕ್ತರ ಮುಖಾಂತರ)
7. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಲೆಕ್ಕಾಗಿಧಿಕಾರಿಗಳು, ಮತ್ತು ಮುಖ್ಯ ಯೋಜನಾಧಿಕಾರಿಗಳು. (ಆಯುಕ್ತರ ಮುಖಾಂತರ)
9. ಎಲ್ಲಾ ಖಜಾನಾಧಿಕಾರಿಗಳು (ಆಯುಕ್ತರ ಮುಖಾಂತರ)
10. ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ. (ಆಯುಕ್ತರ ಮುಖಾಂತರ)
11. ನಿರ್ದೇಶಕರು, ಜನಶಕ್ತಿ ಮತ್ತು ಯೋಜನಾ ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
13. ಉಪನಿರ್ದೇಶಕರು, ಖಜಾನಾ ಇಲಾಖೆ, ಎಂ.ಎಸ್.ಸಿ, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
14. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
15. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು
16. ಸರ್ಕಾರದ ಪ್ರಾಧಾನ ಕಾರ್ಯದರ್ಶಿಗಳು, (ಪ್ರಾಥಮಿಕ & ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
17. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು